# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2173

ಸದಸ್ಯರ ಹೆಸರು : ಶ್ರೀ ಎಂ.ಎಲ್. ಅನಿಲ್ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸುವ ದಿನಾಂಕ : 18-03-2022

ಉತ್ತರಿಸುವ ಮಾನ್ಯ ಸಚಿವರು : ಕೃಷಿ ಸಚಿವರು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ರೈತರುಗಳಿಗೆ ಕೇಂದ್ರ ಸರ್ಕಾರದಿಂದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ ಅಡಿಯಲ್ಲಿ ವರ್ಷಕ್ಕೆ ರೂ.6,000/- ರಂತೆ ರಾಜ್ಯ ಸರ್ಕಾರದ ವತಿಯಿಂದ ಹೆಚ್ಚುವರಿಯಾಗಿ ರೂ.4,000/- ಗಳನ್ನು ಕಂತುಗಳಲ್ಲಿ ನೀಡಲಾಗಿದೆಯೇ; ನೀಡಿದ್ದಲ್ಲಿ ಇಲ್ಲಿಯವರೆಗೆ ಬಿಡುಗಡೆಯಾದ ಮೊತ್ತವೆಷ್ಟು; | ಹೌದು.<br>ಕೇಂದ್ರ ಸರ್ಕಾರದಿಂದ ರೂ.6,000/- ಹಾಗೂ ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ.4,000/-ಗಳನ್ನು ನೀಡಲಾಗುತ್ತಿದೆ.<br>ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ಕೋಲಾರ ಜಿಲ್ಲೆಗೆ ಕೇಂದ್ರ ಸರ್ಕಾರದಿಂದ **ರೂ.184.65 ಕೋಟಿ** ಮತ್ತು ರಾಜ್ಯ ಸರ್ಕಾರದಿಂದ **ರೂ.89.71 ಕೋಟಿಗಳ** ಆರ್ಥಿಕ ಸಹಾಯ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗೆ ಕೇಂದ್ರ ಸರ್ಕಾರದಿಂದ **ರೂ.188.32 ಕೋಟಿ** ಮತ್ತು **ರಾಜ್ಯ ಸರ್ಕಾರದಿಂದ ರೂ.83.96 ಕೋಟಿಗಳ** ಆರ್ಥಿಕ ಸಹಾಯವನ್ನು DBT ಮುಖಾಂತರ ವರ್ಗಾವಣೆ ಮಾಡಲಾಗಿರುತ್ತದೆ. |
| (ಆ) | ಸದರಿ ಯೋಜನೆ ಅಡಿಯಲ್ಲಿ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ಪ್ರಯೋಜನ ಪಡೆದಿರುವ ರೈತರೆಷ್ಟು; | ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ 2018-19 ರಿಂದ ಇಲ್ಲಿಯವರೆಗೆ ಕೋಲಾರ ಜಿಲ್ಲೆಯ **1,14,626** ರೈತರು ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಯ **1,14,113** ರೈತರು ಪ್ರಯೋಜನ ಪಡೆದಿದ್ದಾರೆ. |
| (ಇ) | ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಈ ಯೋಜನೆಗೆ ಬಿಡುಗಡೆಯಾಗಿರುವ ಹಣವೆಷ್ಟು; ಮತ್ತು ಎಷ್ಟು ಜನ ರೈತರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ; (ವಿವರ ಒದಗಿಸುವುದು) | ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ಒಟ್ಟಾರೆಯಾಗಿ ಕೇಂದ್ರ ಸರ್ಕಾರದಿಂದ 53,83,156 ರೈತ ಫಲಾನುಭವಿಗಳಿಗೆ ರೂ.8696.43 ಕೋಟಿ ಮತ್ತು ರಾಜ್ಯ ಸರ್ಕಾರದಿಂದ 50,35,650 ರೈತ ಫಲಾನುಭವಿಗಳಿಗೆ ರೂ.3864.66 ಕೋಟಿಗಳ ಆರ್ಥಿಕ ನೆರವು ರೈತರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ. |
| (ಈ) | ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ವ್ಯಾಪ್ತಿಯ ರೈತರಿಗೆ ಬ್ಯಾಂಕ್ ಖಾತೆಗೆ ಹಣ ಜಮೆಯಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡ ಕ್ರಮವೇನು; | ಕೆಲವೊಂದು ಪ್ರಕರಣಗಳಲ್ಲಿ ರೈತರ ಖಾತೆಗೆ ಹಣ ಜಮೆಯಾಗಿರುವುದಿಲ್ಲ.<br>ಪಿ.ಎಂ.ಕಿಸಾನ್ ಯೋಜನೆಯ ನಿಯಮಾನುಸಾರ ಫಲಾನುಭವಿಗಳ ಅರ್ಹತೆಯನ್ನು ನಿಯತಕಾಲಿಕವಾಗಿ ಖಾತ್ರಿಪಡಿಸಿಕೊಳ್ಳುವುದು ರಾಜ್ಯದ ಜವಾಬ್ದಾರಿಯಾಗಿದ್ದು, ಫಲಾನುಭವಿ ರೈತರ ಜಮೀನು ಮಾಲೀಕತ್ವ ವಿವರಗಳನ್ನು ಪರಿಶೀಲಿಸುವುದು ಅಗತ್ಯವಾಗಿರುತ್ತದೆ. ಈ ಸಂಬಂಧ ಯೋಜನೆಯ ಫಲಾನುಭವಿಗಳ ಜಮೀನು ವಿವರಗಳನ್ನು |

| | | |
|---|---|---|
| | | ಭೂಮಿ' ತಂತ್ರಾಂಶ ಆಧಾರಿತವಾಗಿ ಪರಿಶೀಲನೆಗೆ ಒಳಪಡಿಸಿ, ತಾಳೆಯಾಗದ ಕೋಲಾರ ಜಿಲ್ಲೆಯ **34,727** ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ **38,405** ರೈತರ ಮಾಹಿತಿಯನ್ನು ತಾತ್ಕಾಲಿಕವಾಗಿ ಆರ್ಥಿಕ ನೆರವು ವರ್ಗಾವಣೆ ಪಕ್ರಿಯೆಯಲ್ಲಿ ತಡೆಹಿಡಿಯಲಾಗಿರುತ್ತದೆ. ಹೀಗೆ ತಡೆಹಿಡಿದಿರುವ ರೈತರ ಮಾಹಿತಿಯನ್ನು ಕ್ಷೇತ್ರ ಮಟ್ಟದಲ್ಲಿ ಪರಿಶೀಲನೆಗೆ ಒಳಪಡಿಸಿ ಅರ್ಹರೆಂದು ಗುರುತಿಸಲ್ಪಟ್ಟ ಕೋಲಾರ ಜಿಲ್ಲೆಯ **27,761** ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ **36,000** ರೈತರ ವಿವರಗಳನ್ನು ಆರ್ಥಿಕ ನೆರವು ವರ್ಗಾವಣೆ ಪ್ರಕ್ರಿಯೆಯಲ್ಲಿ ತಡೆಮುಕ್ತಗೊಳಿಸಲಾಗಿದೆ ಮತ್ತು ಬಾಕಿಯಿರುವ ರೈತರ ವಿವರಗಳ ಮರುಪರಿಶೀಲನಾ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. |
| (ಉ) | ಸದರಿ ಯೋಜನೆಯ ಉದ್ದೇಶಗಳು ಹಾಗೂ ಮಾರ್ಗಸೂಚಿಗಳೇನು? (ವಿವರ ನೀಡುವುದು) | ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ರೈತರಿಗೆ ಕೃಷಿ ಚಟುವಟಿಕೆಯಲ್ಲಿ ಉತ್ತಮ ಪರಿಕರಗಳನ್ನು ಬಳಸಿ ಬೆಳೆಗಳ ಆರೋಗ್ಯ ನಿರ್ವಹಣೆ ಹಾಗು ಹೆಚ್ಚಿನ ಇಳುವರಿ ಪಡೆದು ನಿರೀಕ್ಷಿತ ಆದಾಯ ಗಳಿಸಲು ನೆರವಾಗುವ ಉದ್ದೇಶದಿಂದ ಸಾಗುವಳಿ ಭೂಮಿ ಹೊಂದಿರುವ (01.02.2019ರ ಒಳಗಾಗಿ ಸ್ವಾಧೀನದಲ್ಲಿರುವ /ಭೂದಾಖಲೆಯಲ್ಲಿ ಹೆಸರಿರುವ) ಎಲ್ಲಾ ಅರ್ಹ ರೈತ ಕುಟುಂಬಕ್ಕೆ (ಒಂದು ಕುಟುಂಬ ಎಂದರೆ ಗಂಡ, ಹೆಂಡತಿ ಮತ್ತು ಅಪ್ರಾಪ್ತ ಮಕ್ಕಳು) ವಾರ್ಷಿಕ ರೂ.6000/- ಗಳ ಆರ್ಥಿಕ ನೆರವನ್ನು ನೀಡಲಾಗುತ್ತಿದೆ. ಸದರಿ ನೆರವನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುವುದು.<br><br>**ಅನರ್ಹತೆ:** ಭಾರತ ಸರ್ಕಾರದ ಮಾರ್ಗಸೂಚಿಯನ್ವಯ<br>• ಭೂಮಿ ಹೊಂದಿರುವ ಸಂಘ ಅಥವಾ ಸಂಸ್ಥೆಗಳು.<br>• ಕುಟುಂಬ ಸದಸ್ಯರು ಮಾಜಿ ಅಥವಾ ಹಾಲಿ ಸಾಂವಿಧಾನಿಕ ಹುದ್ದೆಗಳನ್ನು ಹೊಂದಿದ್ದಲ್ಲಿ.<br>• ಕುಟುಂಬ ಸದಸ್ಯರು ಮಾಜಿ ಮತ್ತು ಹಾಲಿ ಸಚಿವರು /ರಾಜ್ಯಸಚಿವರು/ ಲೋಕ ಸಭಾ ಸದಸ್ಯರು/ ರಾಜ್ಯ ಸಭೆ ಸದಸ್ಯರು/ ರಾಜ್ಯ ವಿಧಾನಸಭೆ/ ವಿಧಾನ ಪರಿಷತ್ತಿನ ಸದಸ್ಯರು/ ನಗರ ಸಭೆ ಅಧ್ಯಕ್ಷರು/ ಪುರಸಭೆ ಅಧ್ಯಕ್ಷರು / ಜಿಲ್ಲಾ ಪಂಚಾಯಿತಿ ಅಧ್ಯಕ್ಷರು.<br>• ಕುಟುಂಬ ಸದಸ್ಯರು ನಿವೃತ್ತಿ/ ಹಾಲಿ ಸೇವೆಯಲ್ಲಿರುವ ಕೇಂದ್ರ/ ರಾಜ್ಯಸರ್ಕಾರಗಳ / ಸಚಿವಾಲಯ ಕಛೇರಿ/ ಇಲಾಖೆ/ ಕ್ಷೇತ್ರ ಕಛೇರಿಗಳು/ ಕೇಂದ್ರ/ ರಾಜ್ಯ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು/ ಅಂಗ ಸಂಸ್ಥೆಗಳು/ ಸ್ವಾಯತ್ತ ಸಂಸ್ಥೆಗಳ ಅಧಿಕಾರಿಗಳು ಹಾಗೂ ನೌಕರರು/ ಸ್ಥಳೀಯ ಸಂಸ್ಥೆಗಳ ಖಾಯಂ ನೌಕರರು |

| | | |
|---|---|---|
| | | (ಗ್ರೂಪ್ಡಿ /4ನೇ ವರ್ಗ/ Multi Tasking Staff ಹೊರಡುಪಡಿಸಿ).<br>• ಕುಟುಂಬ ಸದಸ್ಯರು ರೂ. 10,000/- ಅಥವಾ ಹೆಚ್ಚಿನ ಮೊತ್ತ ಪಡೆಯುತ್ತಿರುವ ವಯೋನಿವೃತ್ತ / ನಿವೃತ್ತ ಪಿಂಚಣಿದಾರರು. (ಗ್ರೂಪ್/ 4ನೇ ವರ್ಗ/ Multi Tasking Staff ಹೊರತುಪಡಿಸಿ).<br>• ಕುಟುಂಬ ಸದಸ್ಯರು ಕಳೆದ ಸಾಲಿನ ಆದಾಯ ತೆರಿಗೆ ಪಾವತಿದಾರರು.<br>• ವೈದ್ಯ, ಅಭಿಯಂತರು, ವಕೀಲರು, ಲೆಕ್ಕ ಪರಿಶೋಧಕರು, ವಾಸ್ತು ಶಿಲ್ಪದಂತ ವೃತ್ತಿ ಪರಸಂಸ್ಥೆಯಲ್ಲಿ ನೊಂದಾಯಿಸಿಕೊಂಡು ಸದರಿ ವೃತ್ತಿಯನ್ನು ಕೈಗೊಳ್ಳುತ್ತಿರುವವರು. |

**ಸಂಖ್ಯೆ: ಕೃಇ 37 ಕೃಕೈಉ 2022**

(ಬಿ.ಸಿ. ಪಾಟೀಲ್)
**ಕೃಷಿ ಸಚಿವರು**